# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಹೊಂಬೇಗೌಡನಗರ ಉಪವಿಭಾಗ,
ಬೃ.ಬೆಂ.ಮ.ಪಾಲಿಕೆ 7ನೇ ಅಡ್ಡರಸ್ತೆ, 7ನೇ ಮುಖ್ಯರಸ್ತೆ, ಜಯನಗರ 2ನೇ ಬ್ಲಾಕ್ ಬೆಂಗಳೂರು

ಸಂಖ್ಯೆ:ಸ.ಇಂ/ವಾ–153/ವಾರ್ಡ್ ಸಭೆ/2020–21 ದಿನಾಂಕ:05/12/2020

## ವಾರ್ಡ್ –153ರ ವಾರ್ಡ್ ಸಭೆಯ ನಡವಳಿ

ದಿನಾಂಕ:05/12/2020 ರಂದು ಹೊಂಬೇಗೌಡನಗರ ಉಪವಿಭಾಗ ವಾರ್ಡ್–153ರ ವಾರ್ಡ್ ಕಛೇರಿಯಲ್ಲಿ ಶ್ರೀಮತಿ. ವರಲಕ್ಷ್ಮಿ ಸಹಾಯಕ ಆಯುಕ್ತರು, (ಆಡಳಿತ) ದಕ್ಷಿಣ ವಲಯ ವಾರ್ಡ್ 153ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

| ಕ್ರಮ ಸಂಖ್ಯೆ | ಅಧಿಕಾರಿಯವರ ಹೆಸರು | ಪದನಾಮ/ಇಲಾಖೆ | ಹಾಜರಾತಿ |
|---|---|---|---|
| 1 | ಶ್ರೀ. ವರಲಕ್ಷ್ಮಿ | ಸಹಾಯಕ ಆಯುಕ್ತರು (ಆಡಳಿತ) ದಕ್ಷಿಣ ವಲಯ | ಹಾಜರಿದ್ದರು |
| 2 | ಶ್ರೀ. ನರಸಿಂಹಯ್ಯ ಎನ್. | ಕಿರಿಯ ಅಭಿಯಂತರರು ವಾರ್ಡ್–153–ಜಯನಗರ | ಹಾಜರಿದ್ದರು |
| 3 | ಶ್ರೀ. ಗೋಪಾಲಕೃಷ್ಣ | ಕಂದಾಯ ವಸೂಲಿಗಾರರು ಹೊಂಬೇಗೌಡನಗರ ಉಪವಿಭಾಗ | ಹಾಜರಿದ್ದರು |
| 4 | ಶ್ರೀ. ವಿದ್ಯಾಧರ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–153 | ಹಾಜರಿದ್ದರು |
| 5 | ಶ್ರೀ. ಮುರಳೀಧರ್ | ಕೆಲಸ ಪರಿವೀಕ್ಷಕರು BWSSB | ಹಾಜರಿದ್ದರು |

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ | ಹಾಜರಾತಿ |
|---|---|---|---|
| 1 | ಶ್ರೀ. ಲಕ್ಷ್ಮೀಶ | ಸದಸ್ಯರು | ಹಾಜರಿದ್ದರು |
| 2 | ಶ್ರೀಮತಿ. ಶಾನ್ ಅಹಮದ್ | ಸದಸ್ಯರು | ಹಾಜರಿದ್ದರು |
| 3 | ಶ್ರೀ. ಭೀಮಪ್ಪ | ಸದಸ್ಯರು | ಹಾಜರಿದ್ದರು |
| 4 | ಶ್ರೀಮತಿ. ಪ್ರಮೀಳಾ | ಸದಸ್ಯರು | ಹಾಜರಿದ್ದರು |

ಮು.ಪು.ನೋ.

Scanned with CamScanner

| ಕ್ರಮ ಸಂಖ್ಯೆ | ಸ್ಥಳೀಯರ ಹೆಸರು | ವಿವರ | ಹಾಜರಾತಿ |
|---|---|---|---|
| 1 | ಶ್ರೀ. ಕಮಲ್ | ಸ್ಥಳೀಯರು | ಹಾಜರಿದ್ದರು |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು/ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ನಿಗಧಿತ ಸಮಯಕ್ಕೆ ಪ್ರಾರಂಭಿಸಲಾಯಿತು. ಸಭೆಯಲ್ಲಿ ಹಾಜರಿದ್ದ ಶ್ರೀಮತಿ. ವರಲಕ್ಷ್ಮಿ, ಸಹಾಯಕ ಆಯುಕ್ತರು (ಆಡಳಿತ) ರವರು ಹಿಂದಿನ ಸಭೆಯಲ್ಲಿ ನಡೆದ ವಿಷಯಗಳ ಬಗ್ಗೆ ಮತ್ತೊಮ್ಮೆ ಚರ್ಚಿಸಿದರು ವಿವರಗಳು ಈ ಕೆಳಕಂಡಂತಿವೆ.

1. <u>ವಾರ್ಡಿನಲ್ಲಿ ಘನತ್ಯಾಜ್ಯ ನಿರ್ವಹಣೆಯ ಬಗ್ಗೆ:-</u> ಸಭೆಯ ಅಧ್ಯಕ್ಷತೆ ವಹಿಸಿದ್ದ ಶ್ರೀಮತಿ. ವರಲಕ್ಷ್ಮಿ, ಸಹಾಯಕ ಆಯುಕ್ತರು (ಆಡಳಿತ) ರವರು ಮಾತನಾಡಿ ವಸತಿ ಪ್ರದೇಶದಲ್ಲಿ (Residential Area) ವಾಣಿಜ್ಯ ಚಟುವಟಿಕೆಗಳು ನಡೆಯುತ್ತಿರುವುದು ಪತ್ತೆ ಮಾಡಿ ನೋಟಿಸ್ ಜಾರಿ ಮಾಡುವಂತೆ ವಾರ್ಡಿನ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಘನತ್ಯಾಜ್ಯ ವಿಭಾಗದ ಕಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ ವಿದ್ಯಾಧರ್ ರವರು ಪ್ರತಿಕ್ರಿಯಿಸಿ ಈ ಬಗ್ಗೆ ಈಗಾಗಲೇ ಸೂಕ್ತ ಕ್ರಮಗಳು ಪ್ರಗತಿಯಲ್ಲಿದ್ದು, ಮುಂದಿನ ಸಭೆಗಳಲ್ಲಿ ಸಂಪೂರ್ಣ ವರದಿ ಸಲ್ಲಿಸುವುದಾಗಿ ತಿಳಿಸಿದರು.

2. <u>ವಾರ್ಡಿನ ರಸ್ತೆಗಳಲ್ಲಿ ಗುಂಡಿಗಳ ಬಗ್ಗೆ:-</u> ಸಭೆಯಲ್ಲಿ ಹಾಜರಿದ್ದ ಶ್ರೀಮತಿ. ವರಲಕ್ಷ್ಮಿ, ಸಹಾಯಕ ಆಯುಕ್ತರು (ಆಡಳಿತ) ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚುವ ಬಗ್ಗೆ ಶೀಘ್ರವಾಗಿ ಕ್ರಮ ವಹಿಸುವಂತೆ ತಿಳಿಸಿದರು ಈ ಬಗ್ಗೆ ವಾರ್ಡಿನ ಅಭಿಯಂತರರು ಉತ್ತರಿಸಿ ಈಗಾಗಲೇ ಪಾಲಿಕೆಯ ಮಿಕ್ಸ್ ಪ್ಲಾಂಟ್ ಕಛೇರಿಗೆ ಇಂಡೆಂಟ್ ನೀಡಲಾಗಿದ್ದು, ಕಾರ್ಯಪಾಲಕ ಅಭಿಯಂತರರು (ಚಿಕ್ಕಪೇಟೆ) ವಿಭಾಗ ರವರ ಕಛೇರಿಯಲ್ಲಿ ಈ ಬಗ್ಗೆ ಮಾಹಿತಿಯನ್ನು ಪಡೆದು ರಸ್ತೆ ಗುಂಡಿ ಮುಚ್ಚುವ ಕಾರ್ಯ ಕೂಡಲೇ ನಿರ್ವಹಿಸಲಾಗುವುದೆಂದು ತಿಳಿಸಿದರು.

3. <u>ಪಾದಚಾರಿ ಮಾರ್ಗಗಳ ಬಗ್ಗೆ:-</u> ಸಭೆಯ ಅಧ್ಯಕ್ಷತೆ ವಹಿಸಿದ್ದ ಶ್ರೀಮತಿ. ವರಲಕ್ಷ್ಮಿ, ಸಹಾಯಕ ಆಯುಕ್ತರು (ಆಡಳಿತ) ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ಇರುವ ಎಲ್ಲಾ ಪಾದಚಾರಿ ಮಾರ್ಗಗಳನ್ನು ಅತಿ ಜರೂರಾಗಿ ಅಭಿವೃದ್ಧಿಪಡಿಸಿ ಸಾರ್ವಜನಿಕರಿಗೆ ಓಡಾಡಲು ಅನುಕೂಲ ಮಾಡಿಕೊಡುವ ಬಗ್ಗೆ ಗಮನ ಹರಿಸಲು ತಿಳಿಸಿದರು ಈ ವಿಷಯವಾಗಿ ಸಭೆಯಲ್ಲಿ ಹಾಜರಿದ್ದ ಕಿರಿಯ ಅಭಿಯಂತರರು ಮಾತನಾಡಿ ಬಗ್ಗೆ ಕ್ರಮ ವಹಿಸುವುದಾಗಿ ತಿಳಿಸಿದರು.

ಮು.ತಿ.ನೋ.-



Scanned with CamScanner

4. **<u>ವಾರ್ಡಿನಲ್ಲಿ ಪ್ರಗತಿಯಲ್ಲಿರುವ ಕಾಮಗಾರಿಗಳ ಬಗ್ಗೆ:-</u>** ಸಭೆಯಲ್ಲಿ ಹಾಜರಾಗಿದ್ದ ಸ್ಥಳೀಯರಾದ ಕಮಲ್ ರವರು ಮತ್ತು ಸದಸ್ಯರುಗಳಾದ ಶ್ರೀಮತಿ. ಶಾನ್ ಅಹಮದ್, ಶ್ರೀ. ಲಕ್ಷ್ಮೀಶ, ಶ್ರೀಮತಿ. ಪ್ರಮೀಳಾ ಹಾಗೂ ಶ್ರೀ. ಭೀಮಪ್ಪ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯ ಹಲವು ಸ್ಥಳಗಳಲ್ಲಿ ಅಪರಿಚಿತರು ಅನಧಿಕೃತವಾಗಿ ಕಸ ಎಸೆಯುವುದನ್ನು ಹಾಗೂ ಡೆಬ್ರಿಸ್ ಹಾಕುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಒಮ್ಮತವಾಗಿ ಸಿ.ಸಿ. ಕ್ಯಾಮರಾವನ್ನು ಅಳವಡಿಸುವ ಬಗ್ಗೆ ಕೋರಿರುತ್ತಾರೆ. ಹಾಗೂ ವಾರ್ಡಿನಲ್ಲಿ ಎಲ್ಲೆಲ್ಲಿ ಸಿ.ಸಿ. ಕ್ಯಾಮರಾ ಅಳವಡಿಸಬೇಕು ಎಂಬ ಬಗ್ಗೆ ಪಟ್ಟಿಯನ್ನು ಸಹ ನೀಡುವುದಾಗಿ ಈ ಸಭೆಯಲ್ಲಿಯೂ ತಿಳಿಸಿರುತ್ತಾರೆ. ಈ ಬಗ್ಗೆ ವಾರ್ಡಿನ ಕಿರಿಯ ಅಭಿಯಂತರರು ಪ್ರತಿಕ್ರಿಯಿಸಿ ಸಿ.ಸಿ. ಕ್ಯಾಮರಾ ಅಳವಡಿಸುವ ಕಾಮಗಾರಿಗೆ ಕಾರ್ಯಾದೇಶ ದೊರೆತಿದ್ದು, ದಿನಾಂಕ:07-12-2020 ರಿಂದ ಕಾಮಗಾರಿಯು ಪ್ರಾರಂಭಗೊಳ್ಳಲಿದ್ದು, ಸ್ಥಳೀಯರು ಹಾಗೂ ಸದಸ್ಯರು ನೀಡುವ ಪಟ್ಟಿಯ ಅನುಸಾರ ಕ್ಯಾಮರಾ ಅಳವಡಿಸುವ ಕಾರ್ಯ ನಿರ್ವಹಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

## 5. <u>ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ.</u>

1. **<u>ಬೆಸ್ಕಾಂ ವಿಭಾಗ-</u>** ಹಿಂದಿನ ಸಭೆಯಲ್ಲಿ ಹಾಜರಾಗಿದ್ದ ಸದಸ್ಯರುಗಳಾದ ಶ್ರೀಮತಿ. ಶಾನ್ ಅಹಮದ್, ಶ್ರೀ. ಲಕ್ಷ್ಮೀಶ, ಶ್ರೀಮತಿ. ಪ್ರಮೀಳಾ ಹಾಗೂ ಶ್ರೀ. ಭೀಮಪ್ಪ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯ ಬಸವನಗುಡಿ, ಕೃಷ್ಣಪ್ಪ ಗಾರ್ಡನ್, ರಾಮ ಮಂದಿರ ರಸ್ತೆ, ರಾಜೋಜಿರಾವ್ ರಸ್ತೆ, ಬಿ.ಹೆಚ್.ಇ.ಎಲ್, ಉಮರ್ ಷರೀಫ್ ರಸ್ತೆ ಇತ್ಯಾದಿ ಕಡೆಗಳಲ್ಲಿ ಬೀದಿ ದೀಪದ ಕಂಬಗಳಲ್ಲಿ ದೀಪ ಉರಿಯದೇ ರಾತ್ರಿ ವೇಳೆಯಲ್ಲಿ ಸಾರ್ವಜನಿಕರು ಸಂಚರಿಸಲು ಬಹಳ ತೊಂದರೆಯಾಗುತ್ತಿರುವ ಬಗ್ಗೆ ತಿಳಿಸಿದರು. ಸಭೆಯಲ್ಲಿ ಬೆಸ್ಕಾಂ ಇಲಾಖೆಯವರು ಹಾಜರಿಲ್ಲದ ಕಾರಣ ವಾರ್ಡಿನ ಅಭಿಯಂತರರು ಈ ವಿಷಯವಾಗಿ ಪ್ರತಿಕ್ರಿಯಿಸಿ ಬೆಸ್ಕಾಮ ಇಲಾಖೆಯವರಿಗೆ ಈ ಬಗ್ಗೆ ವರದಿ ಸಲ್ಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳುವುದಾಗಿ ತಿಳಿಸಿದರು.

2. **<u>ಅರಣ್ಯ ವಿಭಾಗ-</u>** ಸಭೆಯಲ್ಲಿ ಹಾಜರಿದ್ದ ವಾರ್ಡ್ ಕಮಿಟಿ ಸದಸ್ಯರಾದ ಶಾನ್ ಅಹಮದ್ ಹಾಗೂ ಸ್ಥಳೀಯರಾದ ಕಮಲ್ ರವರು ಮಾತನಾಡಿ ವಾರ್ಡಿನ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗದಲ್ಲಿ ಮರದ ಕೊಂಬೆ ರೆಂಬೆಗಳನ್ನು ತೆರವುಗೊಳಿಸಲು ಕ್ರಮ ವಹಿಸುವಂತೆ ಕೋರಿದರು. ಈ ಬಗ್ಗೆ ಅಧ್ಯಕ್ಷರು ಮಾತನಾಡಿ ಅರಣ್ಯವಲಯಾಧಿಕಾರಿಗಳು, ದಕ್ಷಿಣ ವಲಯ ರವರಿಗೆ ಪತ್ರ ವ್ಯವಹರಿಸುವಂತೆ ತಿಳಿಸಿದರು ಈ ವಿಷಯವಾಗಿ ಸಭೆಯಲ್ಲಿ ಹಾಜರಿದ್ದ ಕಿರಿಯ ಅಭಿಯಂತರರು ಮಾತನಾಡಿ ಈ ಬಗ್ಗೆ ಪತ್ರವನ್ನು ತಯಾರಿಸಿ ಮಂಡಿಸುವುದಾಗಿ ಸಭೆಗೆ ತಿಳಿಸಿದರು.

ಮು.ತಿ.ನೋ..



Scanned with CamScanner

ಹಾಗೂ ಸ್ಥಳೀಯರಾದ ಕಮಲ್ ರವರು ಮಾತನಾಡಿ ವಾರ್ಡಿನ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗದಲ್ಲಿರುವ ಗಿಡಗಳಿಗೆ Tree Guard ಅನ್ನು ಅಳವಡಿಸುವಂತೆ ಕೋರಿದರು. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಕಿರಿಯ ಅಭಿಯಂತರರು ಮಾತನಾಡಿ ಈ ಬಗ್ಗೆ ಅರಣ್ಯ ಇಲಾಖೆಗೆ ಪತ್ರವನ್ನು ತಯಾರಿಸಿ ಮಂಡಿಸುವುದಾಗಿ ಸಭೆಗೆ ತಿಳಿಸಿದರು.

ಅಂತಿಮವಾಗಿ ಅಧ್ಯಕ್ಷರು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಸಹಿ/ | ಸಹಿ/ |
| (ನಳಿನಾಕ್ಷಮ್ಮ ಎನ್.) | (ವರಲಕ್ಷ್ಮಿ) |
| ಕಾರ್ಯದರ್ಶಿ | ನೋಡಲ್ ಅಧಿಕಾರಿ |
| ವಾರ್ಡ್-153 ಜಯನಗರ | ವಾರ್ಡ್-153 ಜಯನಗರ |

Scanned with CamScanner